## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ. 38 /2025** **ಪಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು | ರಮ್ಯ |
| ತಂದೆಯ/ಗಂಡನ ಹೆಸರು | ಅರ್ಜುನ್ ದೀಪ್ |
| ವಯಸ್ಸು | 46 ವರ್ಷ |
| ಉದ್ಯೋಗ | ಮ್ಯಾನೇಜರ್ ಕರ್ನಾಟಕ ಗ್ರಾಮೀಣ ಬ್ಯಾಂಕ್ |
| ವಾಸ್ತವ್ಯ | ಬೇಗೂರು |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ** 16-10 -2025. |

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದ್ದು ಅದನ್ನು ನಾನೇ ಹೇಳಿ ಬರೆಯಿಸಿ ಸಹಿ ಮಾಡಿರುತ್ತೇನೆ.

ಕಿಸಾನ್ ಕ್ರೆಡಿಟ್ ಕಾರ್ಡ್ ಅಡಿಯಲ್ಲಿ ನೀಡಿದ ಬೆಳೆ ಸಾಲ ಸೌಲಭ್ಯದ ಅಸಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಘೋಷಣಾ ಪತ್ರದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಅಡಮಾನ ಪತ್ರದ ಕರಾರಿನ ಅಸಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ವಕೀಲರ ಕಛೇರಿ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 4 ಎಂದು, ಐದು ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-5 ರಿಂದ 9 ಎಂದು, ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 10 ರಿಂದ 14 ಎಂದು, ದಿಃ 14-10-2025 ರಂದು ಕರ್ನಾಟಕ ಗ್ರಾಮೀಣಾ ಬ್ಯಾಂಕ್

ರವರು ನೀಡಿರುವ ಬ್ಯಾಂಕ್ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ– 15 ಎಂದು, ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿಯಲ್ಲಿ ಬೆಳೆಗಳ ಸಾಲ ಕೊಡಲು ಕರಾರು/ನಿಬಂಧನೆಗಳ ಅಸಲು ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ– 16 ಎಂದು, ಕರ್ನಾಟಕ ಗ್ರಾಮೀಣಾ ಬ್ಯಾಂಕ್ ನೀಡಿರುವ ಮೂರು Acknowledgment liabilities ನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ– 17 ರಿಂದ 19 ಎಂದು, ಕರ್ನಾಟಕ ಗ್ರಾಮೀಣಾ ಬ್ಯಾಂಕ್ ನ ಎರಡು ಸ್ಟೇಟ್ ಮೆಂಟ್‌ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ– 20 ಮತ್ತು 21 ಎಂದು, ಗಣಕೀಕೃತ ಆರ್ ಟಿ ಸಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ– 22 ಎಂದು, ದಿಃ 01–02–2022 ರಂದು ನೀಡಿರುವ Letter of revival ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ– 23 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿರುತ್ತಾರೆ ಸಮಯ ನೀಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**2 ನೇ ಪ್ರ.ದ. ನ್ಯಾ ದಂ. ನಂಜನಗೂಡು**